ರೈತರಿಗೆ ದೊರೆಯುವ ಸೌಲಭ್ಯಗಳು

1893 (1405); ಶ್ರೀ ಗುರುಪಾದಗೌಡ ಸಂಗನಗೌಡ (ರೋಣ)

ಅ) ಗದಗ ಜಿಲ್ಲೆಯಲ್ಲಿ ರೋಣ ತಾಲ್ಲೂಕು ಜಿಲ್ಲೆಯಲ್ಲಿಯೇ ಅತೀ ದೊಡ್ಡ ತಾಲ್ಲೂಕಾಗಿದ್ದು, ಈ ಭಾಗದ ರೈತರುಗಳು ತೋಟಗಾರಿಕಾ ಬೆಳೆಗಳಲ್ಲಿ ಆಸಕ್ತಿ ಹೊಂದಿದ್ದು, ರೋಣದಲ್ಲಿರುವ ಸಹಾಯಕ ತೋಟಗಾರಿಕಾ ನಿರ್ದೇಶಕರ ಕಛೇರಿಯಿಂದ ಒದಗಿಸಲಾಗುತ್ತಿರುವ ಸೌಲಭ್ಯಗಳಿಗೆ ಅತೀ ಹೆಚ್ಚಿನ ಬೇಡಿಕೆ ಇರುವುದರಿಂದ ಸಾಕಷ್ಟು ರೈತರುಗಳಿಗೆ ಸರ್ಕಾರದ ಯೋಜನೆಗಳು ದೊರಕಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕ್ಷೇತ್ರದ ವ್ಯಾಪ್ತಿಗಿಂತ ಕಡಿಮೆ ಅನುದಾನ ಬಿಡುಗಡೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಇನ್ನೂ ಹೆಚ್ಚಿನ ತೋಟಗಾರಿಕಾ ಬೆಳೆಗಳ ರೈತರುಗಳಿಗೆ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ರೋಣದಲ್ಲಿರುವ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಸರ್ಕಾರದ ಚಿಂತನೆಯೇನು?

ಡಾ. ಶಾಮನೂರು ಶಿವಶಂಕರಪ್ಪ (ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು)

ಅ) ಗಮನಕ್ಕೆ ಬಂದಿದೆ.

ಆ) ಅನುದಾನ ಲಭ್ಯತೆಯನ್ನು ಆಧರಿಸಿ ರೈತರ ಬೇಡಿಕೆಗಳನ್ನು ಪೂರೈಸ ಲಾಗುತ್ತಿದೆ.

ಇ) ಇಲ್ಲ.